**ದಿನಾಂಕಃ 11-11-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.**

<u>ಮುಂದುವರೆದ ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದಃ-</u>

4. ಆರೋಪಿ ಚಾಸಾ.1 ರವರ ಎಡ ಭುಜಕ್ಕೆ ಕತ್ತಿಯಿಂದ ಕಡಿದಿದ್ದರಿಂದ ಅವರಿಗೆ ಪೆಟ್ಟಾಗಿ ರಕ್ತ ಸೋರುತ್ತಿತ್ತು. ನಾನು ಅವರನ್ನು ನನ್ನ ಕಾರಿನಲ್ಲಿ ಚಿಕ್ಕಮಗಳೂರು ಜಿಲ್ಲಾ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆಗಾಗಿ ದಾಖಲು ಮಾಡಿದೆನು. ಚಾಸಾ.1 ರವರ ಹೆಂಡತಿ ಮತ್ತು ಚಾಸಾ.8 ಕೃಷ್ಣನಾಯ್ಕರವರು ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣೆಗೆ ಹೋಗಿ ದೂರನ್ನು ಕೊಟ್ಟರು. ನಂತರ ಪೊಲೀಸರು ಆಸ್ಪತ್ರೆಗೆ ಬಂದು ಚಾಸಾ.1 ರವರನ್ನು ವಿಚಾರಿಸಿದರು.

5. ಆದಾದ ಸ್ವಲ್ಪ ದಿನಗಳ ಬಳಿಕ ಪೊಲೀಸರು ಕಾಂಚನಾ ಗಂಗಾ ಎಸ್ಟೇಟಿಗೆ ಬಂದು ಮಹಜರ್ ಮಾಡಿದರು. ಆ ಸಮಯದಲ್ಲಿ ನಾನು, ಚಾಸಾ.4 ರವಿ, ಲಲಿತಾ ಮತ್ತು ಕೃಷ್ಣಮೂರ್ತಿರವರು ಹಾಜರಿದ್ದೆವು. ನಾನು ಪೊಲೀಸರಿಗೆ ಸ್ಥಳವನ್ನು ತೋರಿಸಿದೆನು. ಅಲ್ಲಿ ಪೊಲೀಸರು ಸಂಜೆ 5 ಗಂಟೆಯಿಂದ 5.30 ಗಂಟೆಯವರೆಗೆ ಮಹಜರನ್ನು ಬರೆದುಕೊಂಡರು. ಸದರಿ ಮಹಜರನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಮಹಜರ್ ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಮಹಜರನ್ನು ನಿ.ಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು.

6. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯು

ನಿಪಿ.1 ಮಹಜರಿಗೆ ಸಹಕರಿಸುವಂತೆ ಸಾಕ್ಷಿಗೆ ನೀಡಿದ್ದಾರೆ ಎನ್ನಲಾದ ನೋಟೀಸ್ ಆಗಿದ್ದು, ಸದರಿ ನೋಟೀಸನ್ನು ನಿಪಿ.2 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು.

7. ಸಾಕ್ಷಿಗೆ 2 ಫೋಟೋಗಳನ್ನು ತೋರಿಸಲಾಗಿ, ಅವುಗಳಲ್ಲಿ ತನ್ನ ಇರುವಿಕೆಯನ್ನು ಗುರುತಿಸಿ, ಅವುಗಳನ್ನು ಪೊಲೀಸರು ಮಹಜರ್ ಜರುಗಿಸಿದ ಸಮಯದಲ್ಲಿ ತೆಗೆದಿದ್ದಾಗಿ ನುಡಿದಿರುತ್ತಾರೆ. ಸದರಿ ಫೋಟೋಗಳನ್ನು ನಿ.ಪಿ.3 ಮತ್ತು ಪಿ.4 ಎಂದು ಗುರುತಿಸಲಾಯಿತು. ಸದರಿ ಫೋಟೋಗಳಲ್ಲಿ ನನ್ನೊಂದಿಗೆ ಚಾಸಾ.4, ಪೊಲೀಸರ ಮತ್ತು ಇನ್ನೊಬ್ಬ ವ್ಯಕ್ತಿಯ ಇರುವಿಕೆ ಕಂಡುಬರುತ್ತದೆ, ಅವರ ಹೆಸರು ನನಗೆ ನೆನಪಿಲ್ಲ. ನಂತರ ಅದೇ ದಿನ ಪೊಲೀಸರು ಆರೋಪಿಯನ್ನು ಕರೆದುಕೊಂಡು ಬಂದಿದ್ದರು. ಆ ಸಮಯದಲ್ಲಿ ನಾನು, ರವಿ ಮತ್ತು ಇನೊಬ್ಬ ವ್ಯಕ್ತಿ ಹಾಜರಿದ್ದರು, ಅವರ ಹೆಸರು ನನಗೆ ನೆನಪಿಲ್ಲ.

(ಈ ಹಂತದಲ್ಲಿ ವಿಶೇಷ ಸರ್ಕಾರಿ ಅಭಿಯೋಜಕರು ಸಾಕ್ಷಿಯ ಮುಂದಿನ ಮುಖ್ಯ ವಿಚಾರಣೆಗೆ ಸಮಯ ಕೋರಿದ ಮೇರೆಗೆ ಸಾಕ್ಷಿಯ ಮುಂದಿನ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.)

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)

1 ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.